ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 16–12–2014

## ಪತ್ರಿಕಾ ಪ್ರಕಟಣೆ

# ಪ್ರತಿ ತಾಲೂಕಿನಲ್ಲಿ ಟ್ರಾನ್ಸ್‌ಫಾರ್ಮರ್ ಬ್ಯಾಂಕ್ ಸ್ಥಾಪನೆ

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):–** ಪ್ರತಿ ತಾಲೂಕಿಗೊಂದು ಟ್ರಾನ್ಸ್‌ಫಾರ್ಮರ್ ಬ್ಯಾಂಕ್ ಸ್ಥಾಪಿಸಲಾಗುವುದೆಂದು ಇಂಧನ ಸಚಿವ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ಕೆ. ಗೋವಿಂದರಾಜ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ದುರಸ್ತಿಗೆ ಒಳಗಾದ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಪಡಿಸಲು ಅಥವಾ ಬದಲಿ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲು ಅನುಕೂಲ ಮಾಡಿಕೊಡುವ ಉದ್ದೇಶದಿಂದ ಪ್ರತಿ ತಾಲೂಕಿಗೊಂದು ಟ್ರಾನ್ಸ್‌ಫಾರ್ಮರ್ ಬ್ಯಾಂಕ್ ಸ್ಥಾಪನೆ ಮಾಡಿ ಅಲ್ಲಿ ಕನಿಷ್ಠ 100 ಟ್ರಾನ್ಸ್‌ಫಾರ್ಮರ್‌ಗಳನ್ನು ಕಾಯ್ದಿರಿಸಲಾಗುವುದೆಂದು ಅವರು ಭರವಸೆ ನೀಡಿದರು.

ರಾಜ್ಯದಾದ್ಯಂತ ಕಳೆದ 5 ವರ್ಷಗಳಲ್ಲಿ ವಿವಿಧ ಉದ್ದೇಶಗಳಿಗಾಗಿ 1137 ಕೋಟಿ ರೂ. ವೆಚ್ಚದಲ್ಲಿ ಒಟ್ಟು 154820 ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿಸಲಾಗಿದೆ. ರೈತರಿಗೆ ಅಳವಡಿಸಿರುವ ಟ್ರಾನ್ಸ್‌ಫಾರ್ಮರ್‌ಗಳ ಮೂರು ದಿನದೊಳಗೆ ಹಾಗೂ ಕುಡಿಯುವ ನೀರಿಗೆ ಅಳವಡಿಸಿರುವ ಟ್ರಾನ್ಸ್‌ಫಾರ್ಮರ್‌ಗಳನ್ನು 24 ಗಂಟೆಯೊಳಗೆ ದುರಸ್ತಿ ಮಾಡಬೇಕೆಂದು ಗಡವು ನೀಡಲಾಗಿದೆ. ಅವಧಿಯೊಳಗೆ ದುರಸ್ತಿಪಡಿಸದ ಸಿಬ್ಬಂದಿ ಮೇಲೆ ಕ್ರಮ ಕೈಗೊಳ್ಳುವ ಜೊತೆಗೆ ಸರ್ಕಾರಕ್ಕೆ ಇದರಿಂದ ನಷ್ಟವಾದ ಮೊತ್ತವನ್ನು ಅವರ ವೇತನದಿಂದಲೇ ಕಡಿತಗೊಳಿಸಲಾಗುವುದೆಂದು ಸಚಿವರು ತಿಳಿಸಿದರು.

ಟ್ರಾನ್ಸ್‌ಫಾರ್ಮರ್‌ಗಳ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡಿರುವ ಸರ್ಕಾರವು, ಸದ್ಯದಲ್ಲೇ 20 ಕೋಟಿ ವೆಚ್ಚದಲ್ಲಿ 1 ಲಕ್ಷ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿಸಲಿದೆ. ಹಾಗೆಯೇ ಗುಣಮಟ್ಟದ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿಸುವ ಸಲುವಾಗಿ ರಚಿಲಾಗಿರುವ ಸಮಿತಿಯಿಂದ ಪರೀಕ್ಷಿಸಿದ ನಂತರವೇ ಬಿ.ಇ.ಇ. ಲೇಬಲ್ಡ್ ಸ್ಟಾರ್ ರೇಟೆಡ್ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿಸಲಾಗುತ್ತಿದೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.

# ಲಾಭದಾಯಕದಲ್ಲಿ 45 ಸಾರ್ವಜನಿಕ ಉದ್ದಿಮೆಗಳು

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):–** ರಾಜ್ಯದಲ್ಲಿ ಒಟ್ಟು 45 ಸಾರ್ವಜನಿಕ ಉದ್ದಿಮೆಗಳು ಲಾಭದಾಯಕವಾಗಿದೆ ಎಂದು ಪೌರಾಡಳಿತ ಸಚಿವರಾದ ಖಮರುಲ್ ಇಸ್ಲಾಂ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಇಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ದಯಾನಂದ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಜ್ಯದಲ್ಲಿ ಒಟ್ಟು 60 ಸಾರ್ವಜನಿಕ ಉದ್ದಿಮೆಗಳು ಕಾರ್ಯನಿರ್ವಹಿಸುತ್ತಿದ್ದು. ಅದರಲ್ಲಿ 45 ಉದ್ದಿಮೆಗಳು ಲಾಭದಾಯಕವಾಗಿದ್ದು, 15 ಉದ್ದಿಮೆಗಳು ನಷ್ಟವನ್ನು ಅನುಭವಿಸುತ್ತಿದೆ ಎಂದು ಮಾಹಿತಿ ನೀಡಿದರು.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು ಮೈಸೂರು ಲ್ಯಾಂಪ್ಸ್ ಕಾರ್ಖಾನೆಯನ್ನು ಲಾಭದಾಯಕದತ್ತ ಕೊಂಡೊಯ್ಯಲು ಸಾಧ್ಯವಿಲ್ಲವೆಂದು ವರದಿಯನ್ನು ನೀಡಿದ್ದಾರೆ. ಈ ಕಾರ್ಖಾನೆಯ ಕಾರ್ಮಿಕರಿಗೆ ಪರಿಹಾರ ನೀಡಲು ಸರ್ಕಾರಿ ಸ್ವಾಮ್ಯದ ಉದ್ಯಮಗಳ ಸುಧಾರಣೆ ನೀತಿಗೆ ವಿರುದ್ಧವಾಗಿರುವ ಕಾರಣ ಉಚ್ಚ ನ್ಯಾಯಾಲಯಕ್ಕೆ ಸರ್ಕಾರವು ರಿಟ್ ಆಪೀಲು ಸಲ್ಲಿಸಿರುವ ಕಾರಣ ಪ್ರಕರಣ ನ್ಯಾಯಾಲಯದಲ್ಲಿದೆ ಎಂದರು.

ಆದರೆ ದಯಾನಂದ್ ಅವರು ಸರ್ಕಾರ 40 ಕೋಟಿ ರೂ. ಬಂಡವಾಳ ಹೂಡಿದರೆ ಮೈಸೂರು ಲ್ಯಾಂಪ್ಸ್ ಕಾರ್ಖಾನೆಯಲ್ಲಿ ವಿದ್ಯುತ್ ಉಳಿತಾಯವಾಗುವಂತಹ ಸಿ.ಎಫ್.ಎಲ್. ಬಲ್ಬುಗಳನ್ನು ತಯಾರಿಸಬಹುದೆಂದು ಕೂಡ ವರದಿಯಲ್ಲಿದೆಯೆಂದು ಸಚಿವರ ಗಮನಕ್ಕೆ ತರಲಾಗಿದೆ. ಇಂಧನ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ಮಧ್ಯ ಪ್ರವೇಶ ಮಾಡಿ ಈ ಬಗ್ಗೆ ಪರೀಶಿಲನೆ ಮಾಡಲಾಗುವುದೆಂದು ಸದಸ್ಯರಿಗೆ ಭರವಸೆ ನೀಡಿದರು.

## ನಂದಿತಾ ಪ್ರಕರಣ ಸಿ.ಬಿ.ಐ ಗೆ ವಹಿಸುವ ಅವಶ್ಯಕತೆ ಇಲ್ಲ

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):-** ಇತ್ತೀಚೆಗೆ ಸಾವನ್ನಪ್ಪಿದ ತೀರ್ಥಹಳ್ಳಿಯ ಶಾಲಾ ಬಾಲಕಿ ನಂದಿತಾಳ ಪ್ರಕರಣವನ್ನು ಸಿ.ಬಿ.ಐ ಗೆ ವಹಿಸುವ ಅಗತ್ಯ ಇರುವುದಿಲ್ಲವೆಂದು ಗೃಹ ಸಚಿವ ಕೆ.ಜೆ.ಜಾರ್ಜ್ ಅವರು ತಿಳಿಸಿದ್ದಾರೆ.

ಪರಿಷತ್‌ನಲ್ಲಿಂದು ಸದಸ್ಯ ಪ್ರೊ.ಪಿ.ವಿ.ಕೃಷ್ಣಭಟ್ ಅವರು ಶೂನ್ಯ ವೇಳೆಯಲ್ಲಿ ಬಾಲಕಿ ನಂದಿತಾಳ ತಂದೆಯಾದ ಕೃಷ್ಣ ಪೂಜಾರಿ ಅವರ ಅಂಗಡಿಗೆ ದುಷ್ಕರ್ಮಿಗಳು ಬೆಂಕಿ ಹಚ್ಚಿರುವ ಪ್ರಕರಣವನ್ನು ಸಿ.ಬಿ.ಐ ಗೆ ವಹಿಸುವಂತೆ ಅವರು ಕೋರಿರುವ ಹಿನ್ನಲೆಯಲ್ಲಿ ಸಚಿವರು ಸಿ.ಬಿ.ಐ ಗೆ ವಹಿಸಲು ಸಾಧ್ಯವಿಲ್ಲವೆಂದಿದ್ದಾರೆ.

ನವೆಂಬರ್ ಒಂದನೇ ತಾರೀಖಿನಿಂದಲೇ ಕೃಷ್ಣ ಪೂಜಾರಿ ಅವರ ನಿವಾಸದ ಬಳಿ ಸಶಸ್ತ್ರ ಪೊಲೀಸ್ ಸಿಬ್ಬಂದಿಯನ್ನು ಹಾಗೂ 11 ನೇ ತಾರೀಖಿನಿಂದ ರಾತ್ರಿ ವೇಳೆಯಲ್ಲಿ 3 ಜನ ಸಿಬ್ಬಂದಿಯನ್ನು ಅವರ ಅಂಗಡಿ ವ್ಯಾಪ್ತಿಯಲ್ಲಿ ಕಾಲ್ನಡಿಗೆಯಲ್ಲಿ ಗಸ್ತಿಗೆ ನಿಯೋಜನೆ ಮಾಡಲಾಗಿದೆ. ಆದರೆ ಸಿಬ್ಬಂದಿ ಅವರು ಗಸ್ತು ನಿರ್ವಹಿಸಿ ಹೋದ ನಂತರದಲ್ಲಿ ಬೆಳಗಿನ ಜಾವ 3 ಗಂಟೆಗೆ ಯಾರೋ ಕಿಡಿಗೇಡಿಗಳು ಅಂಗಡಿಗೆ ಬೆಂಕಿ ಹಚ್ಚಿದ್ದಾರೆ. ಅಕ್ಟೋಬರ್ 31 ರಲ್ಲೇ ಪ್ರಕರಣವನ್ನು ಸಿ.ಬಿ.ಐಗೆ ವಹಿಸಲಾಗಿದೆ.

5 ಡಿ.ವೈ.ಎಸ್.ಪಿ 8 ಪೊಲೀಸ್ ಇನ್ಸಪೆಕ್ಟರ್ ಹಾಗೂ 25ಕ್ಕಿಂತ ಹೆಚ್ಚಿನ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಹಾಗಾಗಿ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ 5 ತಂಡಗಳು ಸದರಿ ಪ್ರಕರಣದ ಬಗ್ಗೆ ತನಿಖೆಯನ್ನು ನಡೆಸುತ್ತಿರುವುದರಿಂದ ಪ್ರಕರಣವನ್ನು ಸಿ.ಬಿ.ಐಗೆ ವಹಿಸಲು ಅವಶ್ಯಕತೆ ಇಲ್ಲ ಎಂದಿದ್ದಾರೆ.

ಸರ್ಕಾರಕ್ಕೆ ಸಿ.ಬಿ.ಐ ಅಧಿಕಾರಿಗಳ ಮೇಲೆ ಸಂಪೂರ್ಣ ವಿಶ್ವಾಸವಿದ್ದು, ಸದರಿ ತನಿಖೆಯನ್ನು ಅವರು ನಿಷ್ಪಕ್ಷಪಾತವಾಗಿ ನಿರ್ವಹಿಸುತ್ತಾರೆಂದು ಸಚಿವರು ಭರವಸೆ ನೀಡಿದ್ದಾರೆ.

# ಶಾಸಕರಿಗೆ ಒತ್ತಡ ನಿವಾರಣಾ ಶಿಬಿರ

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):–** ಸಮಸ್ಯೆಗಳನ್ನು ನಿಭಾಯಿಸಲು ಕರಗತ ಮಾಡಿಕೊಂಡರೆ ಮಾನಸಿಕ ಒತ್ತಡ ಮತ್ತು ಆತಂಕಗಳಿಂದ ದೂರವಿರಬಹುದು ಎಂದು ರಾಜ್ಯ ಮಾನಸಿಕ ಆರೋಗ್ಯ ಕಾರ್ಯಪಡೆ ಅಧ್ಯಕ್ಷ ಡಾ.ಅಶೋಕ್ ಪೈ ಹೇಳಿದರು.

ಅವರು ಸುವರ್ಣಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರ ಶಾಸಕರಿಗೆ ಆಯೋಜಿಸಲಾಗಿದ್ದ ಮಾನಸಿಕ ಒತ್ತಡ ನಿರ್ವಹಣೆ ಕುರಿತ ಶಿಬಿರದಲ್ಲಿ ಮಾತನಾಡಿದರು.

ಶಾಸಕರಿಗೆ ದೈನಂದಿನ ಕೆಲಸಗಳಲ್ಲಿ ಒತ್ತಡಗಳು, ಸಮಸ್ಯೆಗಳು ಎದುರಾಗುವುದು ಸಹಜ. ಸಮಸ್ಯೆಗಳನ್ನು ಒಪ್ಪಿಕೊಂಡು, ನೀಡಿದ ಜವಾಬ್ದಾರಿಯನ್ನು ಯೋಜಿತವಾಗಿ ಆದಷ್ಟು ಬೇಗನೆ ನಿಭಾಯಿಸಿದರೆ ಮನಸ್ಸು ಹಗುರವಾಗಿ ಒತ್ತಡ ದೂರವಾಗುತ್ತದೆ. ದೈನಂದಿನ ಜೀವನದಲ್ಲಿ ಒತ್ತಡವನ್ನು ಸರಿಯಾಗಿ ನಿಭಾಯಿಸಿದರೆ ಎಲ್ಲಾ ರೀತಿಯ ಮಾನಸಿಕ ಹಾಗೂ ದೈಹಿಕ ತೊಂದರೆಗಳಿಂದ ಮುಕ್ತರಾಗಲು ಸಾಧ್ಯವಿದೆ ಎಂದರು.

ಒತ್ತಡಗಳಿಂದ ಆತಂಕಗಳು ಮೂಡಿ ಹಲವು ಮಾನಸಿಕ ಹಾಗೂ ದೈಹಿಕ ಸಮಸ್ಯೆಗಳಿಗೆ ಕಾರಣವಾಗುತ್ತವೆ. ಅಸಂಬದ್ಧ ವಿಚಾರಗಳನ್ನು ಪದೇ ಪದೇ ಮನಸ್ಸಿಗೆ ಹಂಚಿಕೊಳ್ಳದೆ, ಒಪ್ಪಿಕೊಂಡ ಕೆಲಸವನ್ನು ಆತ್ಮವಿಶ್ವಾಸದಿಂದ ಅಚ್ಚುಕಟ್ಟಾಗಿ ಮಾಡಿದರೆ ಒತ್ತಡಗಳಿಂದ ದೂರ ಉಳಿಯಬಹುದು ಎಂದು ಹೇಳಿದರು.

ಮಕ್ಕಳ ಮನೋವೈದ್ಯೆ ಡಾ.ಪ್ರೀತಿ ಶಾನಭಾಗ್ ಮಾತನಾಡಿ, ಒತ್ತಡದ ಜತೆಗೆ ಸಹಜವಾಗಿ ಕೆಲಸ ಮಾಡುವುದನ್ನು ರೂಢಿಗೊಳಿಸಬೇಕು. ಒತ್ತಡಕ್ಕೆ ಒಳಗಾದರೆ ರಸ್ತೆ ಅಪಘಾತ, ಖಿನ್ನತೆ, ಹೃದಯ ರೋಗಗಳು, ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್‌ನಂತಹ ಗಂಭೀರ ಖಾಯಿಲೆಗಳಿಗೆ ತುತ್ತಾಗುವ ಅಪಾಯವಿದೆ. ಎಂತಹ ಒತ್ತಡದ ಮಧ್ಯೆಯೂ ಸ್ಥಿತಪ್ರಜ್ಞೆಯನ್ನು ಕಾಪಾಡಿಕೊಂಡು ಸಮಸ್ಯೆ ನಿಭಾಯಿಸಲು ಸ್ವ ಅರಿವು, ಸಮಾನ ಮನಸ್ಕರೊಂದಿಗೆ ಸಂವಾದ ಮೊದಲಾದ ಸಕರಾತ್ಮಕ ಕಾರ್ಯಗಳಲ್ಲಿ ತೊಡಗಿಸಕೊಳ್ಳಬೇಕು ಎಂದು ಹೇಳಿದರು.

ಸಕರಾತ್ಮಕ ಒತ್ತಡಗಳಿದ್ದರೆ ದೈನಂದಿನ ಕಾರ್ಯಕ್ಷಮತೆ ಹೆಚ್ಚುತ್ತದೆ. ಆದರೆ ನಕರಾತ್ಮಕ ಒತ್ತಡಗಳು ನೀಡುವ ದೈಹಿಕ ಸೂಚನೆಗಳನ್ನು ಬೇಗನೇ ಅರಿತುಕೊಳ್ಳದಿದ್ದರೆ ಮಾನಸಿಕ ಹಾಗೂ ದೈಹಿಕ ಬಾಧೆಗೆ ತುತ್ತಾಗಿ ಖಿನ್ನತೆಗೆ ಒಳಗಾಗಬೇಕಾಗುತ್ತದೆ. ಚಿಕ್ಕ ಒತ್ತಡವನ್ನು ಬಹುದಿನಗಳವರೆಗೆ ನಿರ್ಲಕ್ಷ್ಯ ಮಾಡಿದರೆ ದೊಡ್ಡ ಸಮಸ್ಯೆಗಳಿಗೆ ಆಹ್ವಾನ ನೀಡಿದಂತಾಗುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕುಟುಂಬ ಕಲ್ಯಾಣ ಹಾಗೂ ಆರೋಗ್ಯ ಸಚಿವ ಯು.ಟಿ.ಖಾದರ್ ಅವರು, ನಿರಂತರವಾಗಿ ಒತ್ತಡದಲ್ಲಿ ಕಾರ್ಯನಿರ್ವಹಿಸುವ ಜನಪ್ರತಿನಿಧಿಗಳು ಸಹಜವಾಗಿ ಮಾನಸಿಕ ಒತ್ತಡಗಳಿಗೆ ಒಳಗಾಗುತ್ತಾರೆ. ಒತ್ತಡ ನಿಭಾಯಿಸುವುದರ ಬಗ್ಗೆ ಅರಿವು ನೀಡುವ ಉದ್ದೇಶದಿಂದ ಆರೋಗ್ಯ ಇಲಾಖೆಯಿಂದ ಈ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಮಾನಸಿಕ ಆರೋಗ್ಯ ತಜ್ಞ ಡಾ.ಎ.ಆರ್.ಕೃಷ್ಣಮೂರ್ತಿ ಮಾತನಾಡಿದರು. ಹಲವು ಶಾಸಕರು ಶಿಬಿರದಲ್ಲಿ ಪಾಲ್ಗೊಂಡಿದ್ದರು.

# ಅತಿಥಿ ಉಪನ್ಯಾಸಕರ ಖಾಯಮಾತಿಗೆ ಅವಕಾಶವಿಲ್ಲ:

## ಸಚಿವ ಆರ್.ವಿ.ದೇಶಪಾಂಡೆ

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):-** ಗೌರವಧನದ ಆಧಾರದ ಮೇಲೆ ಸರ್ಕಾರ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಖಾಯಮಾತಿ ಅಥವಾ ನೇಮಕಾತಿಯಲ್ಲಿ ಕೃಪಾಂಕ ನೀಡಲು ನಿಯಮಗಳಲ್ಲಿ ಅವಕಾಶವಿಲ್ಲ ಎಂದು ಉನ್ನತ ಶಿಕ್ಷಣ ಸಚಿವ ಆರ್.ವಿ.ದೇಶಪಾಂಡೆ ಸದನಕ್ಕೆ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿಂದು ಶೂನ್ಯ ವೇಳೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 11862 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. ಕಳೆದ ಶೈಕ್ಷಣಿಕ ವರ್ಷದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಅರ್ಹತೆ ಆಧಾರದಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಈ ಪೈಕಿ ಸ್ನಾತಕೋತ್ತರ ಪದವೀಧರರಿಗೆ ರೂ. 8ಸಾವಿರ, ಪಿಎಚ್‌ಡಿ, ನೆಟ್, ಸ್ಲೆಟ್ ಪದವೀಧರರಿಗೆ ರೂ. 10ಸಾವಿರ ಗೌರವಧನ ನೀಡಲಾಗುತ್ತಿದೆ. ಗೌರವಧನ ಹೆಚ್ಚಳದ ಪ್ರಸ್ತಾಪ ಹಣಕಾಸು ಇಲಾಖೆಗೆ ಸಲ್ಲಿಸಲಾಗಿದ್ದು, ಶೀಘ್ರವೇ ಗೌರವ ಧನ ಹೆಚ್ಚಳ ಕುರಿತಂತೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು.

ಕಳೆದ ಸರ್ಕಾರದಲ್ಲಿ ಅತಿಥಿ ಉಪನ್ಯಾಸಕರ ವೇತನ ಬಾಕಿ ಉಳಿಸಿಕೊಂಡಿದ್ದ 52ಕೋಟಿ ರೂ.ಗಳನ್ನು ಪಾವತಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ 60.45ಕೋಟಿ ರೂ. ಗೌರವ ಧನವಾಗಿ ಅನುದಾನ ಬಿಡುಗಡೆ ಮಾಡಿದ್ದು, ನವೆಂಬರ್‌ವರೆಗಿನ ವೇತನವನ್ನು ಈಗಾಗಲೇ ಪಾವತಿಸಲಾಗಿದೆ. ಪ್ರತಿ ತಿಂಗಳು ಅತಿಥಿ ಉಪನ್ಯಾಸಕರಿಗೆ ನಿಯಮಿತವಾಗಿ ಗೌರವಧನ ನೀಡಲಾಗುತ್ತಿದೆ ಎಂದು ಹೇಳಿದರು.

ಸರ್ಕಾರ ಹೊಸದಾಗಿ ಸಿಇಟಿ ಮೂಲಕ 1096 ಉಪನ್ಯಾಸಕರನ್ನು ನೇಮಕಾತಿ ಪ್ರಕ್ರಿಯೆ ಆರಂಭಿಸಿದೆ. ಯುಜಿಸಿ ನಿಯಮಾವಳಿ ಹಾಗೂ ರೋಸ್ಟರ್ ನಿಯಮಾವಳಿ ಪ್ರಕಾರ ನೇಮಕಾತಿ ಮಾಡಲಾಗುವುದು. ಆದರೆ ಗೌರವ ಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಖಾಯಮಾತಿಯಾಗಲಿ, ನೇಮಕಾತಿಯಲ್ಲಿ ಕೃಪಾಂಕ ಒದಗಿಸಲು ನಿಯಮಾವಳಿಗಳಲ್ಲಿ ಅವಕಾಶಗಳಿಲ್ಲ. ವಯೋಮಿತಿಯಲ್ಲಿ ಸಡಿಲಿಕೆಗೂ ಅವಕಾಶವಿಲ್ಲ ಎಂದರು.

## ಮೈಸೂರು ಪೇಪರ್ ಮಿಲ್ಸ್ ಪರಿಸರ ಮಾಲಿನ್ಯ ಯಂತ್ರೋಪಕರಣ ಅಳವಡಿಕೆಗೆ ಕ್ರಮ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):-** ಕೇಂದ್ರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನದಂತೆ ಮೈಸೂರು ಪೇಪರ್ ಮಿಲ್ಸ್‌ನಲ್ಲಿ ಪರಿಸರ ಮಾಲಿನ್ಯ ಕಡಿಮೆ ಮಾಡಲು ಕೆಲವು ಯಂತ್ರೋಪಕರಣಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯ ಆರ್.ಕೆ.ಸಿದ್ದರಾಮಣ್ಣ ಅವರು ಮೈಸೂರು ಪೇಪರ್ ಮಿಲ್ಸ್ ಕಾರ್ಖಾನೆಯನ್ನು ಸ್ಥಗಿತಗೊಳಿಸುತ್ತಿರುವ ಬಗ್ಗೆ ಶೂನ್ಯ ವೇಳೆಯಲ್ಲಿ ಮಾಡಿದ ಪ್ರಸ್ತಾವನೆಗೆ ಮುಖ್ಯಮಂತ್ರಿ ಅವರು ಈ ವಿಷಯ ತಿಳಿಸಿದ್ದಾರೆ.

ಕೇಂದ್ರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನಗಳನ್ನು ಪಾಲಿಸಲು ಪಾಲಿಸಲು ಮೈಸೂರು ಪೇಪರ್ ಮಿಲ್ಸ್‌ನಲ್ಲಿ ಕ್ರಮ ಕೈಗೊಳ್ಳಬೇಕಾಗಿತ್ತು. ಈ ಬಗ್ಗೆ ಐಐಟಿ ದೆಹಲಿ ಅವರ ತಾಂತ್ರಿಕ ಸಲಹೆಯೊಂದಿಗೆ ಸೂಕ್ತ ಕ್ರಮ ಕೈಗೊಳ್ಳಲು ಮೈಸೂರು ಪೇಪರ್ ಮಿಲ್ಸ್ ಕ್ರಮ ವಹಿಸಿತ್ತು. ಆದರೆ ಈ ಮಧ್ಯೆ ಕಾರ್ಖಾನೆಗೆ ಭೇಟಿ ನೀಡಿದ ಕೇಂದ್ರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು, ಈಗಾಗಲೇ ಮಾಡಿದ ಪ್ರಗತಿ ಬಗ್ಗೆ ಅಸಮಾಧಾನ ಸೂಚಿಸಿ, ಘಟಕವನ್ನು ಮುಚ್ಚಲು ಆದೇಶಿಸಿರುತ್ತಾರೆ. ಈ ಬಗ್ಗೆ ಮೈಸೂರು ಪೇಪರ್ ಮಿಲ್ಸ್ ರಾಷ್ಟ್ರೀಯ ಹಸಿರು ಟ್ರಿಬ್ಯೂನಲ್ ಮುಂದೆ ಪರಿಶೀಲನಾ ಮನವಿ ಮಾಡಿಕೊಳ್ಳಲು ನಿರ್ಧರಿಸಿದೆ ಎಂದು ಹೇಳಿದ್ದಾರೆ.

## ನೀರಾವರಿ ಸುಧಾರಣಾ ಆಯೋಗ ರಚನೆಗೆ ಸಿದ್ಧತೆ: ಜಲಸಂಪನ್ಮೂಲ ಸಚಿವ ಎಂ.ಬಿ.ಪಾಟೀಲ್

**ಬೆಳಗಾವಿ:ಡಿಸೆಂಬರ್:16:(ಕರ್ನಾಟಕ ವಾರ್ತೆ):-** ಈಗಾಗಲೇ ಪ್ರಗತಿಯಲ್ಲಿರುವ ನೀರಾವರಿ ಕಾಮಗಾರಿಗಳ ಪರಿಶೀಲನೆ, ವಿಳಂಬಕ್ಕೆ ಕಾರಣಗಳು ಇತ್ಯಾದಿಗಳ ಕುರಿತು ಪರಿಶೀಲನೆಗಾಗಿ ನೀರಾವರಿ ಸುಧಾರಣಾ ಆಯೋಗವನ್ನು ರಚಿಸಲಾಗುವುದು ಎಂದು ಅವರು ಹೇಳಿದರು.

ವಿಧಾನ ಪರಿಷತ್‌ನಲ್ಲಿ ನಿಯಮ 68ರ ಅನ್ವಯ ವಿವಿಧ ಸದಸ್ಯರು ನೀಡಿದ್ದ ಸೂಚನೆಗೆ ಮಂಗಳವಾರ ಉತ್ತರಿಸಿದ ಸಚಿವರು, ಉತ್ತರ ಕರ್ನಾಟಕ ಭಾಗದಲ್ಲಿ ಕೃಷ್ಣಾ ಕೊಳ್ಳದ ಬಾಕಿ ಉಳಿದಿರುವ ಎಲ್ಲಾ ನೀರಾವರಿ ಯೋಜನೆಗಳನ್ನು ಮುಂದಿನ 2017ರಲ್ಲಿ ಪೂರ್ಣಗೊಳಿಸಲಾಗುವುದು. ಈಗಾಗಲೇ ಹಲವಾರು ಯೋಜನೆಗಳು ಅನುಷ್ಠಾನಗೊಳ್ಳುತ್ತಿದ್ದು, ಇವುಗಳ ಸಮಗ್ರ ಪರಿಶೀಲನಾ ಕಾರ್ಯಕ್ಕಾಗಿ ಆಯೋಗ ರಚಿಸಲಾಗುತ್ತಿದೆ ಎಂದು ಹೇಳಿದರು.

ನೀರಾವರಿ ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಅರಣ್ಯ ಕಾನೂನುಗಳು ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳಿಂದಾಗಿ ತೊಡಕುಂಟಾಗುತ್ತಿದೆ. ಇವುಗಳ ನಿವಾರಣೆಗಾಗಿ ಜಲಸಂಪನ್ಮೂಲ ಇಲಾಖೆಯಲ್ಲಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಎರಡು ಹುದ್ದೆಗಳನ್ನು ಸೃಜಿಸಲಾಗಿದೆ. ಇದೇ ರೀತಿ ಕೇಂದ್ರ ಸರ್ಕಾರದಲ್ಲಿ ನೀರಾವರಿ ಯೋಜನೆಗಳ ತ್ವರಿತ ಮಂಜೂರಾತಿ ಇತ್ಯಾದಿ ಆಡಳಿತಾತ್ಮಕ ಸಮಸ್ಯೆಗಳ ನಿವಾರಣೆಗಾಗಿ ಹಿರಿಯ ನೀರಾವರಿ ತಜ್ಞ ಅಧಿಕಾರಿಯವರನ್ನು ನೇಮಕ ಮಾಡಲಾಗಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಹೊಸ ಭೂಸ್ವಾಧೀನ ಕಾಯ್ದೆಯನುಸಾರ ನಿಯಮಾವಳಿಗಳನ್ನು ರಾಜ್ಯ ಸರ್ಕಾರ ಈಗಾಗಲೇ ರೂಪಿಸಿದೆ. ಶೀಘ್ರದಲ್ಲೇ ಅಧಿಸೂಚನೆಯನ್ನು ಜಾರಿಗೊಳಿಸಲಾಗುವುದು. ಭೂ ಸ್ವಾಧೀನ ಮತ್ತು ಪುನರ್ ನಿರ್ಮಾಣ ಪ್ರಕ್ರಿಯೆಗಳಿಗಾಗಿ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ರಾಜ್ಯಮಟ್ಟದ ಉನ್ನತ ಸಮಿತಿಯನ್ನು ರಚಿಸಲಾಗಿದೆ. ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಭೂಮಿಗಳ ದಾಖಲೀಕರಣಕ್ಕೆ ಲ್ಯಾಂಡ್ ರಿಜಿಸ್ಟರ್ ನಿರ್ವಹಿಸುತ್ತಿದ್ದು ಇದಕ್ಕಾಗಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದರು.

ಕರ್ನಾಟಕ ನೀರಾವರಿ ನಿಗಮ ಮತ್ತು ಕೃಷ್ಣಾಭಾಗ್ಯ ಜಲನಿಗಮದಿಂದ ಉತ್ತರಕರ್ನಾಟಕದಲ್ಲಿ 80 ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಎಲ್ಲಾ ಯೋಜನೆಗಳಿಂದ 27.91 ಲಕ್ಷ ಹೆಕ್ಟೇರ್ ನೀರಾವರಿಗೆ ಒಳಪಡಲಿದೆ. ಈ ಪೈಕಿ ಈಗಾಗಲೇ 18.96ಲಕ್ಷ ಹೆಕ್ಟೇರ್‌ಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ. 8.96ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಕಲ್ಪಿಸುವ ಕಾರ್ಯ ಪ್ರಗತಿಯಲ್ಲಿದ್ದು, ಮಾರ್ಚ್ 2015ರೊಳಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ಎಂದರು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ ಒಂದು ಮತ್ತು ಎರಡನೇ ಹಂತದ ಯೋಜನೆಗಳು ಪೂರ್ಣಗೊಂಡು 6.15ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ. ಕೃಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತದಲ್ಲಿ 130.90 ಟಿಎಂಸಿ ನೀರು ನ್ಯಾಯಾಧಿಕರಣದಿಂದ ಹಂಚಿಕೆಯಾಗಿದ್ದು, ಈ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ಎತ್ತರವನ್ನು 519.60ರಿಂದ 524.256ಮೀಟರ್‌ಗೆ ಎತ್ತರಿಸಬೇಕಾಗಿದೆ. ಅಣೆಕಟ್ಟು ಹೆಚ್ಚಳದಿಂದ 22ಹಳ್ಳಿಗಳು ಮುಳುಗಡೆಯಾಗಲಿವೆ. 94 ಸಾವಿರ ಎಕರೆ ಜಮೀನು ಮುಳುಗಡೆ ಹೊಂದಲಿದೆ. ಪುರ್ನವಸತಿ ಮತ್ತು ಪುರ್ನನಿರ್ಮಾಣ ಕಾಮಗಾರಿ 1.5 ಲಕ್ಷ ಎಕರೆ ಭೂಮಿ ಸ್ವಾಧೀನ ಪಡಿಸಿಕೊಳ್ಳಲು ಯೋಜಿಸಲಾಗಿದೆ. 25 ಸಾವಿರ ಕುಟುಂಬಗಳ 1 ಲಕ್ಷಕ್ಕೂ ಅಧಿಕ ಜನರನ್ನು ಸ್ಥಳಾಂತರಿಸಬೇಕಾಗಿದೆ ಎಂದು ತಿಳಿಸಿದರು.

ಮುಳುಗಡೆ ಪ್ರದೇಶವನ್ನು ಕಡಿಮೆ ಮಾಡುವ ಹಿನ್ನೆಲೆಯಲ್ಲಿ ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಳ್ಳಲು ಜಾಗತಿಕ ಟೆಂಡರ್ ಕರೆಯಲಾಗುತ್ತದೆ. ಇದರಿಂದ ಮುಳುಗಡೆಯಾಗಲಿವೆ ಎಂದು ಅಂದಾಜಿಸಲಾದ 10 ರಿಂದ 12 ಹಳ್ಳಿಗಳನ್ನು ಉಳಿಸಬಹುದು ಎಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ ಎಂದು ಸಚಿವರು ತಿಳಿಸಿದರು.

**ಚಿತ್ರ ಶೀರ್ಷಿಕೆ :–**ಶಾಸಕರಿಗಾಗಿ ಮಂಗಳವಾರ ಸುವರ್ಣಸೌಧದಲ್ಲಿ ಆಯೋಜಿಸಲಾಗಿದ್ದ ಮಾನಸಿಕ ಒತ್ತಡ ನಿರ್ವಹಣೆ ಶಿಬಿರದಲ್ಲಿ ಮಾನಸಿಕ ಆರೋಗ್ಯ ಕಾರ್ಯಪಡೆ ಅಧ್ಯಕ್ಷ ಡಾ.ಅಶೋಕ್ ಪೈ ಉಪನ್ಯಾಸ ನೀಡಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಉಪಸ್ಥಿತರಿದ್ದರು.